ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹ ಹಾಗೂ ಅದಕ್ಕೆ ಇರುವ ಸೌಲಭ್ಯ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

456 (482) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ಬರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹ ಸಂಖ್ಯೆಗಳೆಷ್ಟು ; ಸದರಿ ವಸತಿ ಗೃಹದಲ್ಲಿ ಎಷ್ಟು ವಿದ್ಯಾರ್ಥಿಗಳು ವಾಸ್ತವ್ಯ ಮಾಡಿರುತ್ತಾರೆ ; ಅವರಿಗೆ ಪ್ರತಿ ದಿನ ನೀಡುವ ಆಹಾರಗಳ ವಿವರ ನೀಡುವುದು ; ಪ್ರತಿ ವಿದ್ಯಾರ್ಥಿಗೆ ಪ್ರತಿ ದಿನ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಆ) ಸದರಿ ವಸತಿ ಗೃಹದಲ್ಲಿ ವಿದ್ಯಾರ್ಥಿಗಳಿಗೆ ಯಾವ ಯಾವ ಸೌಲಭ್ಯ ಕಲ್ಪಿಸಲಾಗಿದೆ ; ವಿವಿಧ ಉದ್ದೇಶಕ್ಕೆ 2018-19 ಹಾಗೂ 2019-20ನೇ ಸಾಲಿನಲ್ಲಿ ಬಂದ ಅನುದಾನ ಹಾಗೂ ಅದನ್ನು ವಿವಿಧ ಲೆಕ್ಕ ಶೀರ್ಷಿಕೆಯಲ್ಲಿ ಬಳಸಿದ ಹಾಗೂ ಅದರಲ್ಲಿ ವಿವಿಧ ವಸ್ತುಗಳನ್ನು ಖರೀದಿಸಿದ ಸವಿಸ್ತಾರ ವರದಿ ಬಗ್ಗೆ ವಿವರವಾದ ಮಾಹಿತಿಯನ್ನು ನೀಡುವುದು ;

(ಇ) ವಸತಿ ಗೃಹದಲ್ಲಿರುವ ವಿದ್ಯಾರ್ಥಿಗಳಿಗೆ ಓದಲು ವಿವಿಧ ಪುಸ್ತಕಗಳನ್ನು ಖರೀದಿಸುವ ವ್ಯವಸ್ಥೆ ಇದೆಯೇ ; ಹಾಗಾದರೆ, ಇದಕ್ಕೆ ಮೀಸಲಿಟ್ಟ ಅನುದಾನ ಎಷ್ಟು ; ಹಾಗಾದರೆ, 2015-16ನೇ ಸಾಲಿನಿಂದ ಇಲ್ಲಿಯವರೆಗೆ ವಿದ್ಯಾರ್ಥಿಗಳಿಗೆ ಪುಸ್ತಕ ಖರೀದಿಸಿದ ವಿವರ ದಾಖಲಾತಿಗಳೊಂದಿಗೆ ನೀಡುವುದು; (ರಶೀದಿಯೊಂದಿಗೆ ಪುಸ್ತಕ ಖರೀದಿಯ ಸವಿಸ್ತಾರ ವರದಿ ನೀಡುವು )